ಕರ್ನಾಟಕ ಸರ್ಕಾರ
(ಪೊಲೀಸ್ ಇಲಾಖೆ)
ಪೊಲೀಸ್ ಮಹಾನಿರ್ದೇಶಕರವರ ಕಛೇರಿ,
ಸಿಐಡಿ, ವಿಶೇಷ ಘಟಕಗಳು ಮತ್ತು ಆರ್ಥಿಕ ಅಪರಾಧಗಳು,
ಕಾರ್ಲಟನ್ ಭವನ, ಅರಮನೆ ರಸ್ತೆ, ಬೆಂಗಳೂರು-560001.

ದೂರವಾಣಿ ಸಂ: 080-22094432 ಇ-ಮೇಲ್ ವಿಳಾಸ: crcod@ksp.gov.in

No:SJPU/Adoption/2024/74

ದಿನಾಂಕ:29/11/2024

Directorate of Child Protection
Inward No. 5452
Date 4/12/2024
Bengaluru-560001

## ಜ್ಞಾಪನ

ವಿಷಯ: ಪರಿತ್ಯಕ್ತ ನವಜಾತ ಶಿಶು ಹಾಗೂ ಮಕ್ಕಳ ಪಾಲನಾ ಸಂಸ್ಥೆಗಳಲ್ಲಿ ದಾಖಲಾಗುವ 18 ವರ್ಷದೊಳಗಿನ ಮಕ್ಕಳ ಪೋಷಕರ ಪತ್ತೆಗೆ ದೂರು ದಾಖಲಿಸಿಕೊಳ್ಳುವ ಕುರಿತು.

ಉಲ್ಲೇಖ: 1.ಸರ್ಕಾರದ ಕಾರ್ಯದರ್ಶಿ, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಹಾಗೂ ವಿಕಲಚೇತನರ ಮತ್ತು ಹಿರಿಯ ನಾಗರಿಕರ ಸಬಲೀಕರಣ ಇಲಾಖೆ ಇವರ ಅಧ್ಯಕ್ಷತೆಯಲ್ಲಿ ದಿನಾಂಕ:09.11.2024 ರಂದು ನಡೆದ ರಾಜ್ಯ ದತ್ತು ಸಂಪನ್ಮೂಲ ಕೇಂದ್ರದ ಆಡಳಿತ ಮಂಡಳಿ ಸಭೆಯ ಸಭಾ ನಡವಳಿಗಳು.

2.ನಿರ್ದೇಶಕರು, ಮಕ್ಕಳ ರಕ್ಷಣಾ ನಿರ್ದೇಶನಾಲಯ, ಬೆಂಗಳೂರು ರವರ ಕಛೇರಿ ಪತ್ರ ಸಂಖ್ಯೆ:ಮರನಿ/ಮರ/ಎಸ್.ಜಿ.ಬಿ/17/2024-25, ದಿ:11.11.2024

** ** **

ಮೇಲ್ಕಂಡ ವಿಷಯಕ್ಕೆ ಸಂಬಂಧಿಸಿದಂತೆ, ದಿನಾಂಕ:09.11.2024 ರಂದು ಸರ್ಕಾರದ ಕಾರ್ಯದರ್ಶಿ, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಹಾಗೂ ವಿಕಲಚೇತನರ ಮತ್ತು ಹಿರಿಯ ನಾಗರಿಕರ ಸಬಲೀಕರಣ ಇಲಾಖೆ ಇವರ ಅಧ್ಯಕ್ಷತೆಯಲ್ಲಿ ನಡೆದ ರಾಜ್ಯ ದತ್ತು ಸಂಪನ್ಮೂಲ ಕೇಂದ್ರದ ಆಡಳಿತ ಮಂಡಳಿ ಸಭೆಯಲ್ಲಿ ಮಕ್ಕಳ ದತ್ತು ಪ್ರಕ್ರಿಯೆಯನ್ನು ನಿಗದಿತ ಸಮಯದಲ್ಲಿ ಪೂರ್ಣಗೊಳಿಸುವುದಕ್ಕೆ ಸಂಬಂಧಿಸಿದಂತೆ ಪೊಲೀಸ್ ಇಲಾಖೆಯಿಂದ ಪರಿತ್ಯಕ್ತ ನವಜಾತ ಶಿಶು ಹಾಗೂ ಮಕ್ಕಳ ಪಾಲನಾ ಸಂಸ್ಥೆಗಳಲ್ಲಿ ದಾಖಲಾಗುವ 18 ವರ್ಷದೊಳಗಿನ ಮಕ್ಕಳ ಪೋಷಕರ ಪತ್ತೆಗೆ ಸಂಬಂಧಿಸಿದಂತೆ ದೂರು ಬಂದು ಕೂಡಲೇ ಎಫ್.ಐ.ಆರ್ ದಾಖಲಿಸಿ ಕೊಂಡು ನಂತರ ನಿಗದಿತ ಅವಧಿಯೊಳಗೆ ಪೋಷಕರು ಪತ್ತೆಯಾಗದಿದ್ದಲ್ಲಿ "Non Traceability Report" ನೀಡುವುದಕ್ಕೆ ಸಂಬಂಧಿಸಿದಂತೆ ಎಲ್ಲಾ ಪೊಲೀಸ್ ಠಾಣೆಗಳಿಗೆ ಸೂಕ್ತ ನಿರ್ದೇಶನ ನೀಡುವಂತೆ ಸೂಚಿಸಲಾಗಿದೆ.

ಈ ವಿಷಯವಾಗಿ ಪೊಲೀಸ್ ಠಾಣಾ ವ್ಯಾಪ್ತಿಯಲ್ಲಿ ಪರಿತ್ಯಕ್ತ ನವಜಾತ ಶಿಶು ಪತ್ತೆಯಾದಲ್ಲಿ ಹಾಗೂ ಮಕ್ಕಳ ಪಾಲನಾ ಸಂಸ್ಥೆಗಳಲ್ಲಿ ದಾಖಲಾಗುವ 18 ವರ್ಷದೊಳಗಿನ ಮಕ್ಕಳ ಪೋಷಕರ ಪತ್ತೆಗೆ ಸಂಬಂಧಿಸಿದಂತೆ ದೂರು ಬಂದು ಕೂಡಲೇ ಸಂಬಂಧಪಟ್ಟ ಪ್ರಕರಣಕ್ಕೆ ಅನುಗುಣವಾಗಿ ಐ.ಪಿ.ಸಿ ಕಲಂ 317 ಅಥವಾ ಬಿ.ಎನ್.ಎಸ್ ಕಲಂ 93 ಹಾಗೂ ಜೆ.ಜೆ ಆಕ್ಟ್ ಕಲಂ 75 ರನ್ವಯ ಕೂಡಲೇ ಎಫ್.ಐ.ಆರ್ ದಾಖಲಿಸಿ ಕೊಂಡು ಕಾನೂನಾತ್ಮಕ ತನಿಖೆ ನಡೆಸಿ ಬಿ.ಎನ್.ಎಸ್.ಎಸ್ ಹಾಗೂ ದತ್ತು ನಿಯಮಾವಳಿಗಳು-2022 ರನ್ವಯ ನಿಗದಿತ ಅವಧಿಯೊಳಗೆ ಅಂತಿಮ ವರದಿಯನ್ನು ಸಲ್ಲಿಸಬೇಕಾಗಿರುತ್ತದೆ.

4/12

...2

ಆದುದರಿಂದ, ಎಲ್ಲಾ ಘಟಕಾಧಿಕಾರಿಗಳು ಈ ಕುರಿತು ತಮ್ಮ ಜಿಲ್ಲೆ/ ಆಯುಕ್ತಾಲಯಗಳಲ್ಲಿ ಕರ್ತವ್ಯ ನಿರ್ವಹಿಸುತ್ತಿರುವ ಠಾಣಾಧಿಕಾರಿಗಳು ಮತ್ತು ಮಕ್ಕಳ ಕಲ್ಯಾಣ ಪೊಲೀಸ್ ಅಧಿಕಾರಿಗಳ ವೈಯಕ್ತಿಕ ಗಮನಕ್ಕೆ ತಂದು 18 ವರ್ಷದೊಳಗಿನ ಅನಾಥ, ಪರಿತ್ಯಕ್ತ ಮಕ್ಕಳನ್ನು ಕಾನೂನು ಬದ್ಧವಾಗಿ ದತ್ತು ಮುಕ್ತಗೊಳಿಸಲು ಅಗತ್ಯ ಕ್ರಮಕೈಗೊಳ್ಳುವುದು. ಈ ಸುತ್ತೋಲೆ ಸ್ವೀಕರಿಸಿರುವುದಕ್ಕೆ ಸೀಕೃತಿಯನ್ನು ಕಡ್ಡಾಯವಾಗಿ ಈ ಕಛೇರಿಗೆ ಕಳುಹಿಸುವುದು.

(ಬಿ. ಕೆ. ಸಿಂಹ, ಐಪಿಎಸ್)
ಹೆಚ್ಚುವರಿ ಪೊಲೀಸ್ ಮಹಾನಿರ್ದೇಶಕರು,
ಸಿ.ಐ.ಡಿ ಮತ್ತು ನೋಡಲ್ ಅಧಿಕಾರಿಗಳು
ಮಕ್ಕಳ ವಿಶೇಷ ಪೊಲೀಸ್ ಘಟಕ,
ಕರ್ನಾಟಕ ರಾಜ್ಯ, ಬೆಂಗಳೂರು.

**ರವರಿಗೆ,**

1. ಪೊಲೀಸ್ ಆಯುಕ್ತರು, ಮೈಸೂರು, ಮಂಗಳೂರು, ಹುಬ್ಬಳ್ಳಿ-ಧಾರವಾಡ, ಬೆಳಗಾವಿ ಹಾಗೂ ಕಲಬುರಗಿ ನಗರ.
2. ಅಪರ ಪೊಲೀಸ್ ಆಯುಕ್ತರು, ಅಪರಾಧ ಮತ್ತು ನೋಡಲ್ ಅಧಿಕಾರಿಗಳು, ಎಸ್‌ಜೆಪಿಯು, ಬೆಂಗಳೂರು ನಗರ.
3. ಎಲ್ಲಾ ಜಿಲ್ಲಾ ಪೊಲೀಸ್ ಅಧೀಕ್ಷಕರು, ಕೆ.ಜಿ.ಎಫ್ ಮತ್ತು ರೈಲ್ವೇಸ್ ಒಳಗೊಂಡಂತೆ.

**ಪ್ರತಿಯನ್ನು ಅಭಿನಂದನೆಗಳೊಂದಿಗೆ ಮಾಹಿತಿಗಾಗಿ:**

1. ಮಹಾ ನಿರ್ದೇಶಕರು ಮತ್ತು ಪೊಲೀಸ್ ಮಹಾನಿರೀಕ್ಷಕರು, ಕರ್ನಾಟಕ ರಾಜ್ಯ, ಬೆಂಗಳೂರು.
2. ಸರ್ಕಾರದ ಕಾರ್ಯದರ್ಶಿ, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಹಾಗೂ ವಿಕಲಚೇತನರ ಮತ್ತು ಹಿರಿಯ ನಾಗರಿಕರ ಸಬಲೀಕರಣ ಇಲಾಖೆ, ಬೆಂಗಳೂರು.
3. ನಿರ್ದೇಶಕರು, ಮಕ್ಕಳ ರಕ್ಷಣಾ ನಿರ್ದೇಶನಾಲಯ, ವಿಶ್ವೇಶ್ವರಯ್ಯ ಕೇಂದ್ರ, ಬೆಂಗಳೂರು.

ಕರ್ನಾಟಕ ಸರ್ಕಾರ
ಮಕ್ಕಳ ರಕ್ಷಣಾ ನಿರ್ದೇಶನಾಲಯ
3 ನೇ ಮಹಡಿ, ವಿಶ್ವೇಶ್ವರಯ್ಯ ಚಿಕ್ಕಗೋಪುರ, ಡಾ॥ ಬಿ.ಆರ್. ಅಂಬೇಡ್ಕರ್ ವೀದಿ, ಬೆಂಗಳೂರು–560001.
e-mail ID: icps.kar@gmail.com Ph.No.080-22867382

ಸಂಖ್ಯೆ: ಮರನಿ/ಮರ/ಎಸ್.ಜಿ.ಬಿ /17/2024-25 ದಿನಾಂಕ:11-11-2024

ಗೆ,

ಹೆಚ್ಚುವರಿ ಪೊಲೀಸ್ ಮಹಾ ನಿರ್ದೇಶಕರು (ಸಿ.ಐ.ಡಿ)
ಮತ್ತು ನೋಡಲ್ ಅಧಿಕಾರಿಗಳು, ಎಸ್.ಜೆ.ಪಿ.ಯು
ಬೆಂಗಳೂರು.

ಮಾನ್ಯರೇ,

ವಿಷಯ:- ಮಕ್ಕಳ ಪಾಲನಾ ಸಂಸ್ಥೆಗಳಲ್ಲಿ ದಾಖಲಾಗುವ 18 ವರ್ಷದೊಳಗಿನ ಮಕ್ಕಳ ಪೋಷಕರ ಪತ್ತೆಗೆ ದೂರು ದ್ಲಾಖಲಿಸಿಕೊಳ್ಳುವ ಕುರಿತು

ಉಲ್ಲೇಖ: ಮಾನ್ಯ ಇಲಾಖಾ ಕಾರ್ಯದರ್ಶಿರವರ ಅಧ್ಯಕ್ಷತೆಯಲ್ಲಿ ದಿನಾಂಕ:09-10-2024 ರಂದು ನಡೆದ ರಾಜ್ಯ ದತ್ತು ಸಂಪನ್ಮೂಲ ಕೇಂದ್ರದ ಆಡಳಿತ ಮಂಡಳಿಯ ಸಭೆಯ ಸಭಾ ನಡವಳಿ.

******

ಮೇಲ್ಕಂಡ ವಿಷಯಕ್ಕೆ ಸಂಬಂಧಿಸಿದಂತೆ ಉಲ್ಲೇಖಿತ ಸಭಾ ನಡವಳಿಗಳ ಪ್ರತಿಯನ್ನು ಈ ಪತ್ರದೊಂದಿಗೆ ತಮ್ಮ ಅವಗಾಹನೆಗೆ ಲಗತ್ತಿಸಲಾಗಿದೆ.

W.P 1003/2021, Temple of Healing V/S Union of India ಪ್ರಕರಣದಲ್ಲಿ ಮಾನ್ಯ ಸರ್ವೋಚ್ಛ ನ್ಯಾಯಾಲಯವು ಸರ್ಕಾರಿ ಮತ್ತು ಖಾಸಗಿ ಮಕ್ಕಳ ಪಾಲನಾ ಸಂಸ್ಥೆಗಳಲ್ಲಿ ದಾಖಲಾಗಿರುವ ಎಲ್ಲಾ ಮಕ್ಕಳ ಪ್ರಕರಣಗಳನ್ನು ಪರಿಶೀಲಿಸಿ ಅನಾಥ, ಪರಿತ್ಯಕ್ತ ಮತ್ತು ಒಪ್ಪಿಸಲ್ಪಟ್ಟ ಮಕ್ಕಳನ್ನು ಕಾನೂನು ಬದ್ಧವಾಗಿ ದತ್ತು ಪ್ರಕಿಯೆಗೆ ಒಳಪಡಿಸಲು ಸೂಚನೆ ನೀಡಲಾಗಿರುತ್ತದೆ.

ಈ ಹಿನ್ನಲೆಯಲ್ಲಿ ಮಕ್ಕಳ ಪಾಲನಾ ಸಂಸ್ಥೆಗಳಲ್ಲಿ ದಾಖಲಾಗಿರುವ 18 ವರ್ಷದೊಳಗಿನ ಅನಾಥ, ಪರಿತ್ಯಕ್ತ ಮಕ್ಕಳನ್ನು ಕಾನೂನು ಬದ್ಧವಾಗಿ ದತ್ತು ಮುಕ್ತಗೊಳಿಸಲು ಕ್ರಮವಹಿಸಲಾಗುತ್ತಿದೆ ಈ ಪ್ರಕ್ರಿಯೆಯಲ್ಲಿ ಅನಾಥ/ ಪರಿತ್ಯಕ್ತ ಮಕ್ಕಳ ಪೋಷಕರ ಪತ್ತೆಗಾಗಿ ಮಕ್ಕಳ ಪಾಲನಾ ಸಂಸ್ಥೆಗಳು ತಮ್ಮ ವ್ಯಾಪ್ತಿಯ ಪೊಲೀಸ್ ಠಾಣೆಗಳಲ್ಲಿ ದೂರು ದಾಖಲಿಸಲಾಗುತ್ತಿದೆ. ಆದರೆ ಈಗಾಗಲೇ ಮಕ್ಕಳು ಒಂದು ವರ್ಷಕ್ಕೂ ಮೇಲ್ಪಟ್ಟು ಮಕ್ಕಳ ಪಾಲನಾ ಸಂಸ್ಥೆಗಳಲ್ಲಿ ಆಶ್ರಯ ಪಡೆದಿದ್ದು ಮತ್ತು ಈಗ ಪೋಷಕರ ಪತ್ತೆಗಾಗಿ ದೂರು ದಾಖಲಿಸುತ್ತಿರುವ ಕುರಿತು ಆಕ್ಷೇಪಣೆ ವ್ಯಕ್ತಪಡಿಸಿ ಕೆಲವು ಪೊಲೀಸ್ ಠಾಣೆಗಳಲ್ಲಿ ದೂರು ದಾಖಲಿಸಿಕೊಂಡಿರುವುದಿಲ್ಲ. ಆದರೆ ಮಾನ್ಯ ಸರ್ವೋಚ್ಛ ನ್ಯಾಯಾಲಯದ ನಿರ್ದೇಶನದಂತೆ ಮಕ್ಕಳನ್ನು ಕಾನೂನು ಬದ್ಧವಾಗಿ ದತ್ತು ಮುಕ್ತಗೊಳಿಸಲು ಈ ಪ್ರಕ್ರಿಯೆ ಅತ್ಯಗತ್ಯವಾಗಿರುತ್ತದೆ.

ಈ ನಿಟ್ಟಿನಲ್ಲಿ ಮಕ್ಕಳ ಪಾಲನಾ ಸಂಸ್ಥೆಗಳು ಅನಾಥ/ಪರಿತ್ಯಕ್ತ ಮಕ್ಕಳ ಪೋಷಕರನ್ನು ಪತ್ತೆ ಹಚ್ಚಲು ದೂರು ನೀಡಿದಾಗ ಪ್ರಕರಣ ದಾಖಲಿಸಿಕೊಂಡು, ಪೋಷಕರ ಪತ್ತೆಗೆ ಕ್ರಮವಹಿಸಿ ಪತ್ತೆಯಾಗದಿದ್ದಲ್ಲಿ ದತ್ತು ನಿಯಮಾವಳಿಗಳು-2022ರ ನಿಯಮ 6(11)ರನ್ವಯ ನಿಗದಿತ ಕಾಲಾವಧಿಯೊಳಗ - ಎರಡು ವರ್ಷದ ಒಳಗಿನ ಮಕ್ಕಳ ಪ್ರಕರಣಗಳಲ್ಲಿ 2 ತಿಂಗಳ ಒಳಗೆ ಮತ್ತು 2 ವರ್ಷ ಮೇಲ್ಪಟ್ಟ ಮಕ್ಕಳ ಪ್ರಕರಣಗಳಲ್ಲಿ 4 ತಿಂಗಳ ಒಳಗೆ Non Traceability Report ನೀಡುವಂತೆ ಎಲ್ಲಾ ಪೊಲೀಸ್ ಠಾಣೆಗಳಿಗೆ ಅಗತ್ಯ ಸುತ್ತೋಲೆ ಹೊರಡಿಸುವಂತೆ ಈ ಮೂಲಕ ಕೋರಲಾಗಿದೆ.

ತಮ್ಮ ವಿಶ್ವಾಸಿ,

ನಿರ್ದೇಶಕರು
ಮಕ್ಕಳ ರಕ್ಷಣಾ ನಿರ್ದೇಶನಾಲಯ
ಬೆಂಗಳೂರು.

015077
14 NOV 2024

14/11/24